# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 599 |
| ಸದಸ್ಯರ ಹೆಸರು | : | ಶ್ರೀ. ಎಸ್. ರವಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 13-12-2024. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧೆಡೆ ಮಹಿಳೆಯರು ಮತ್ತು ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಮತ್ತು ದೌರ್ಜನ್ಯ ಪ್ರಕರಣಗಳು ಆಗಿಂದಾಗ್ಗೆ ದಿನಪತ್ರಿಕೆಗಳಲ್ಲಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೇಯೇ; | ರಾಜ್ಯದ ವಿವಿಧೆಡೆ ಮಹಿಳೆಯರು ಮತ್ತು ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಮತ್ತು ದೌರ್ಜನ್ಯ ಪ್ರಕರಣಗಳು ಆಗಿಂದಾಗ್ಗೆ ದಿನಪತ್ರಿಕೆಗಳಲ್ಲಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ; ಬಾಲಕಿಯರ ಸುರಕ್ಷತೆಗಾಗಿ ಮತ್ತು ಅತ್ಯಾಚಾರ ಪ್ರಕರಣಗಳು ನಡೆಯದಂತೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?(ವಿವರ ನೀಡುವುದು) | • ಮಕ್ಕಳ ಸಹಾಯವಾಣಿ-1098 24*7 ಮಕ್ಕಳ ಸುರಕ್ಷತೆಗಾಗಿ ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿರುತ್ತಾರೆ.<br><br>• ಮಕ್ಕಳ ರಕ್ಷಣಾ ಕಾರ್ಯಕ್ರಮಗಳ ಕುರಿತು ಮಾನ್ಯ ಇಲಾಖಾ ಸಚಿವರ ಸಂದೇಶವನ್ನು ಆಕಾಶವಾಣಿ ಮೂಲಕ ದಿನಾಂಕ:16-09-2024 ರಿಂದ 15-10-2024ರ ವರೆಗೆ ಪ್ರಸಾರಮಾಡಲಾಗಿದೆ.<br><br>• ದಿನಾಂಕ:11.08.2024 ರಿಂದ "ವಾತ್ಸಲ್ಯವಾಣಿ ಎಂಬ 13–ವಾರಗಳ ಸರಣಿ ಕಾರ್ಯಕ್ರಮವನ್ನು ಆಕಾಶವಾಣಿ ಮೂಲಕ ಪ್ರಸಾರ ಮಾಡಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಮಾನ್ಯ ಇಲಾಖಾ ಸಚಿವರು, ಇಲಾಖಾ ಕಾರ್ಯದರ್ಶಿಗಳು, ನಿರ್ದೇಶಕರು ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿ ಜಾಗೃತಿ ಮೂಡಿಸಿದ್ದಾರೆ.<br><br>• ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಒಟ್ಟು 697 ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಸುಮಾರು 575349 ಮಕ್ಕಳು ಹಾಗೂ ಇತರೆ ಭಾಗೀಧಾರರು ಒಳಗೊಂಡಂತೆ ಪ್ರಯೋಜನ ಪಡೆದಿರುತ್ತಾರೆ. (ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ)<br><br>• ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಬಾಲನ್ಯಾಯ ಮಂಡಳಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಪಾಲನೆ/ ಪೋಷಣೆ |

| | | |
|---|---|---|
| | | ಅವಶ್ಯಕತೆ ಇರುವ ಮಕ್ಕಳು ಮತ್ತು ಕಾನೂನು ಸಂಘರ್ಷಕ್ಕೊಳಗಾದ ಮಕ್ಕಳ ಪುನರ್ವಸತಿಗೋಸ್ಕರ ಕಾರ್ಯನಿರ್ವಹಿಸುತ್ತಿವೆ.<br>• ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ.<br>• ಮಕ್ಕಳ ಸುರಕ್ಷತೆಗಾಗಿ ಇರುವ ವಿವಿಧ ಕಾನೂನಗಳ ಕುರಿತು ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>• ಬಾಲಗರ್ಭಿಣಿಯರ ಪ್ರಕರಣಗಳಿಗೆ ಸಂಬಂಧಿಸಿದಂತೆ, ದಿನಾಂಕ:06.09.2024ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.<br>• ಬಾಲಗರ್ಭಿಣಿಯರ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ ಅಧಿಕಾರಿ/ಸಿಬ್ಬಂದಿಗಳ ಸಾಮರ್ಥ್ಯಾಭಿವೃದ್ಧಿ ತರಬೇತಿ ಆಯೋಜಿಸಲು ಕ್ರಮವಹಿಸಲಾಗುತ್ತಿದೆ.<br>• ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ಥರಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿಯೊಂದು ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ನೇಮಿಸಲು ಕ್ರಮವಹಿಸಲಾಗಿದೆ. |

ಮಮಇ 186 ಮಭಾಬ 2024

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.

## ಅನುಬಂಧ

| ಕ್ರ.ಸಂ | ಜಿಲ್ಲೆ | ಅರಿವು ಮತ್ತು ತರಬೇತಿ ಕಾರ್ಯಕ್ರಮ ನಡೆಸಿದ ಸಂಖ್ಯೆ | ಒಟ್ಟು ಭಾಗವಹಿಸಿದವರ ಸಂಖ್ಯೆ |
|---|---|---|---|
| 1 | ಬಾಗಲಕೋಟೆ | 16 | **4864** |
| 2 | ಬೆಂಗಳೂರು ನಗರ | 14 | **4060** |
| 3 | ಬೆಂಗಳೂರು ಉತ್ತರ | 12 | **3150** |
| 4 | ಬೆಂಗಳೂರು ದಕ್ಷಿಣ | 9 | **2015** |
| 5 | ಬೆಂಗಳೂರು ಪೂರ್ವ | 12 | **3864** |
| 6 | ಬೆಂಗಳೂರು ಪಶ್ಚಿಮ | 10 | **5604** |
| 7 | ಬೆಂಗಳೂರು (ಗ್ರಾ) | 19 | **12650** |
| 8 | ಬೆಳಗಾವಿ | 23 | **12685** |
| 9 | ಬಳ್ಳಾರಿ | 18 | **8650** |
| 10 | ಬೀದರ್ | 22 | **16650** |
| 11 | ಚಿಕ್ಕಬಳ್ಳಾಪುರ | 25 | **26860** |
| 12 | ಚಿಕ್ಕಮಗಳೂರು | 15 | **9160** |
| 13 | ವಿಜಯಪುರ | 17 | **14650** |
| 14 | ಚಾಮರಾಜನಗರ | 19 | **18960** |
| 15 | ಚಿತ್ರದುರ್ಗ | 22 | **11200** |
| 16 | ದಾವಣಗೆರೆ | 35 | **52894** |
| 17 | ಧಾರವಾಡ | 25 | **19250** |
| 18 | ಗದಗ | 9 | **5540** |
| 19 | ಕಲಬುರಗಿ | 24 | **20540** |
| 20 | ಹಾಸನ | 20 | **25645** |
| 21 | ಹಾವೇರಿ | 35 | **62546** |
| 22 | ಉತ್ತರಕನ್ನಡ | 26 | **11860** |
| 23 | ಕೊಡಗು | 17 | **12646** |
| 24 | ಕೋಲಾರ | 22 | **15680** |
| 25 | ಕೊಪ್ಪಳ | 19 | **12650** |
| 26 | ಮಂಡ್ಯ | 23 | **16540** |
| 27 | ದಕ್ಷಿಣ ಕನ್ನಡ | 16 | **16786** |
| 28 | ಮೈಸೂರು | 25 | **20650** |
| 29 | ರಾಯಚೂರು | 23 | **26850** |
| 30 | ರಾಮನಗರ | 21 | **18650** |
| 31 | ಶಿವಮೊಗ್ಗ | 33 | **28650** |
| 32 | ತುಮಕೂರು | 25 | **19820** |
| 33 | ಉಡುಪಿ | 23 | **15860** |
| 34 | ಯಾದಗಿರಿ | 9 | **5620** |
| 35 | ವಿಜಯನಗರ | 14 | **11650** |
| | | **697** | **575349** |